ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಯಲಹಂಕ ವಲಯ

ಸಂಖ್ಯೆ:ಬೃ.ಬೆಂ.ಮ.ಪಾ/ಕಾ.ಪಾ.ಅ/ಬ್ಯಾ.ವಿ/ಆ.ಅ/ 29 /2022-23

ಕಾರ್ಯಪಾಲಕ ಅಭಿಯಂತರರು ಕಛೇರಿ
ಬ್ಯಾಟರಾಯನಪುರ ವಿಭಾಗ, ಬಿಬಿಎಂಪಿ,
ಬೆಂಗಳೂರು-92, ದಿನಾಂಕ: 16/09/2022

ಆಡಳಿತಾತ್ಮಕ ಅನುಮೋದನೆ

ವಿಷಯ: Augmentation of Water Supply through Borewell, network of piplines and ground water recharge facilities in ward no. 05 & 06 (Package No-3) (Package Consists of 6 Works)

ಉಲ್ಲೇಖ:
1. ಸರ್ಕಾರದ ಆದೇಶ ಸಂಖ್ಯೆ ನಅಇ 307 ಸಿಎಸ್ಎಸ್ 2020, ದಿನಾಂಕ: 27-07-2021.
2. ಸರ್ಕಾರದ ಆದೇಶ ಸಂಖ್ಯೆ: ನಅಇ 213 ಎಂಎನ್ವೈ 2022 (ಇ) ಬೆಂಗಳೂರು, ದಿನಾಂಕ: 08-09-2022.

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1) ರ ಸರ್ಕಾರದ ಆದೇಶದಂತೆ 15ನೇ ಹಣಕಾಸು ಆಯೋಗ ಅನುದಾನದ ಅಡಿಯಲ್ಲಿ 2020-21ನೇ ಸಾಲಿನ ನೀರು ಸರಬರಾಜು ಸುಧಾರಣೆ ಕಾಮಗಾರಿ ಯೋಜನೆಯಡಿ ಅನುಬಂಧ-2(ಡಿ) ರಲ್ಲಿ ಬ್ಯಾಟರಾಯನಪುರ ವಿಧಾನ ಸಭಾ ಕ್ಷೇತ್ರಕ್ಕೆ ಕ್ರಮ ಸಂಖ್ಯೆ: 07 ರಿಂದ 12 ರಲ್ಲಿನ ಕಾಮಗಾರಿಗಳಿಗೆ ರೂ. 420.00 ಲಕ್ಷಗಳ ಅನುದಾನವನ್ನು ಮೀಸಲಿಡಿಸಲಾಗಿರುತ್ತದೆ. ಅದರಂತೆ ಸಹಾಯಕ ಕಾರ್ಯಪಾಲಕ ಅಭಿಯಂತರರು, ಬ್ಯಾಟರಾಯನಪುರ ಉಪ ವಿಭಾಗ ರವರು ಮಂಜೂರಾಗಿರುವ ರೂ. 420.00 ಲಕ್ಷಗಳಿಗೆ ಅಂದಾಜು ಪಟ್ಟಿಯನ್ನು ತಯಾರಿಸಿ ಆಡಳಿತಾತ್ಮಕ ಮಂಜೂರಾತಿಗಾಗಿ ಸಲ್ಲಿಸಿರುತ್ತಾರೆ.

ಮುಂದುವರೆದು, ಉಲ್ಲೇಖ (2) ರ ಸರ್ಕಾರದ ಆದೇಶ ಸಂಖ್ಯೆ: ನಅಇ 213 ಎಂಎನ್ವೈ 2022 (ಇ) ಬೆಂಗಳೂರು, ದಿನಾಂಕ: 08-09-2022 ರಂತೆ ಆಡಳಿತಾತ್ಮಕ ಅನುಮೋದನೆಯನ್ನು ನೀಡಿದ್ದು, ಮಾನ್ಯ ಮುಖ್ಯ ಆಯುಕ್ತರು, ಬಿ.ಬಿ.ಎಂ.ಪಿ. ರವರ ಕಛೇರಿ ಆದೇಶ ಸಂಖ್ಯೆ: ಬಿ12(1)/ಪಿ.ಆರ್/394/21-22, ದಿನಾಂಕ: 18-01-2022 ರಲ್ಲಿ ನೀಡಿರುವ ಅಧಿಕಾರದನ್ವಯ ಸದರಿ ಕಾಮಗಾರಿಗೆ ಕೆಳಗಿನ ಷರತ್ತುಗಳನ್ವಯ ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿದೆ ಹಾಗೂ ಆಡಳಿತಾತ್ಮಕ ಅನುಮೋದನೆ ಪುಸ್ತಕದ ಪುಟ ಸಂಖ್ಯೆ: 29 ರಲ್ಲಿ ಈ ಕೆಳಗಿನ ಷರತ್ತುಗಳಂತೆ ದಾಖಲಿಸಲಾಗಿದೆ.

ಷರತ್ತುಗಳು:

1. ಅಂದಾಜು ಪಟ್ಟಿಯ ಮೊತ್ತ ರೂ 2.00 ಲಕ್ಷಗಳಿಗೆ ಮೀರಿದ ಕಾಮಗಾರಿಗಳಿಗೆ ಟೆಂಡರ್ ಕರೆಯುವುದು.
2. ರಸ್ತೆ ಇತಿಹಾಸ ಪುಸ್ತಕದಲ್ಲಿ (Road History book/Register) ಈ ಕೆಲಸದ ವಿವರಗಳನ್ನು ದಾಖಲಿಸಿ ಕ್ರಮಬದ್ದಗೊಳಿಸುವುದು.
3. ಧರಪಟ್ಟಿ ಆಧಾರಿತವಲ್ಲದ ಅಂಶಗಳಿಗೆ ಡೆಟಾ ಧರವನ್ನು ತಯಾರಿಸಿ ಅನುಮೋದನೆ ಪಡೆಯುವುದು.
4. ಅಂದಾಜು ಪಟ್ಟಿಯಲ್ಲಿ ಮಾರುಕಟ್ಟೆ ದರ ಅಳವಡಿಸಿಕೊಂಡಿರುವ ಅಂಶಗಳಿಗೆ ಕೊಟೇಷನ್ ಕರೆದು ಅನುಮೋದನೆ ಪಡೆಯುವುದು.
5. ಕೆಲಸದ ಸ್ಥಳದಿಂದ ಸಾಗಣೆ ದೂರಕ್ಕೆ ಅನುಮೋದನೆ ಪಡೆಯುವುದು.
6. ಆರ್.ಸಿ.ಸಿ ಡೆಕ್ಸ್ಲಾಬ್, ಹರಿನೀರು ಮೋರಿಯ ಆಸರೆಗೋಡೆ ಮತ್ತು ಸೇತುವೆ ಕೆಲಸಗಳ ನಿರ್ವಹಣೆಗೆ ಮೊದಲು ವಿನ್ಯಾಸಕ್ಕೆ ಅನುಮೋದನೆ ಪಡೆಯುವುದು.
7. ಮೇಲಿನ ಕೆಲಸದ ವೆಚ್ಚವನ್ನು ಉಪ ಅನುದಾನದಡಿಯಲ್ಲಿ ಭರಿಸುವುದು.
8. ಬಿ.ಎಂ./ಬಿ.ಸಿ. ಅಳವಡಿಸಿಕೊಂಡಿರುವ ರಸ್ತೆಗಳಿಗೆ ನಿಯಮಾನುಸಾರ ಪರೀಕ್ಷೆಗಳನ್ನು ಕೈಗೊಂಡು ಫಲಿತಾಂಶದ ವರದಿಗಳನ್ನು ಪಡೆದುಕೊಳ್ಳುವುದು.
9. ಸದರಿ ಕೆಲಸವು ಎಂಬ್ಯಾಕ್ ಮೆಂಟ್/ಕಾಂಕ್ರೀಟ್/ಡಾಂಬರೀಕರಣ-ಬಿಎಂ-ಬಿಸಿ/WMM-WBM ಕಾಮಗಾರಿಗಳಾಗಿದ್ದಲ್ಲಿ, MORT & H ಅನ್ವಯ ಗುಣಮಟ್ಟ ಪರೀಕ್ಷೆ ಹಾಗೂ Core-cut ಪರೀಕ್ಷೆಗಳನ್ನು ಕೈಗೊಂಡು ಫಲಿತಾಂಶವನ್ನು ಪಡೆದುಕೊಳ್ಳುವುದು.

ಕಾರ್ಯಪಾಲಕ ಅಭಿಯಂತರರು
ಬ್ಯಾಟರಾಯನಪುರ ವಿಭಾಗ,
ಬಿ.ಬಿ.ಎಂ.ಪಿ ಬೆಂಗಳೂರು-92

ಪ್ರತಿಯನ್ನು:

1) ಮಾನ್ಯ ಜಂಟಿ ಆಯುಕ್ತರು (ಯಲಹಂಕ) ವಲಯ, ಬಿ.ಬಿ.ಎಂ.ಪಿ ರವರ ಮಾಹಿತಿಗಾಗಿ.
2) ಕಾರ್ಯಪಾಲಕ ಅಭಿಯಂತರರು (ಗುಣ ನಿಯಂತ್ರಣ) ವಿಭಾಗ ರವರ ಮಾಹಿತಿಗಾಗಿ.